ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
Bangalore Development Authority

000143

ಸಂಖ್ಯೆ : ಬೆಂಅಪ್ರಾ/ನಯೋಸ/PRL-07/2017-18/ 1216 /2018-19.
No.

ದಿನಾಂಕ :
Date : 04/10/2018

# ಕಾರ್ಯಾದೇಶ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸರ್ವೆ ನಂ.80/3(ಪಿ), 80/4, 80/5, 80/6, 80/7 ಮತ್ತು 80/8 ಜಮೀನುಗಳ ಒಟ್ಟು 17,401.34 ಚ.ಮೀ. [04 ಎಕರೆ 12 ಗುಂಟೆ] ವಿಸ್ತೀರ್ಣದಲ್ಲಿ ಹಾಲಿ ಸ್ಥಳದಲ್ಲಿ ಲಭ್ಯವಿರುವ 16,693.14 ಚ.ಮೀ. [04 ಎಕರೆ 05 ಗುಂಟೆ (02 ಗುಂಟೆ ಖರಾಬು ಹೊರತುಪಡಿಸಿ)] ವಿಸ್ತೀರ್ಣಕ್ಕೆ ವಸತಿ ಬಡಾವಣೆ ನಕ್ಷೆಯನ್ನು **ನ್ಯಾಯಾಂಗ ಇಲಾಖೆ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ** ರವರ ಪರವಾಗಿ ಅನುಮೋದಿಸುವ ಬಗ್ಗೆ.

ಉಲ್ಲೇಖ

1. ಅರ್ಜಿದಾರರ ಮನವಿ ದಿನಾಂಕ 03.07.2017.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 136/2017, ದಿನಾಂಕ 09.11.2017.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-07/1743/2017-18, ದಿನಾಂಕ 02.01.2018.
4. ಕೆನರಾ ಬ್ಯಾಂಕ್ ಚಲನ್ ನಂ. 9668, ದಿನಾಂಕ 05.01.2018.
5. ಈ ಕಛೇರಿ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/PRL-07/68/2018-19, ದಿನಾಂಕ 13.04.2018.
6. ಹೆಚ್ಚುವರಿ ಜಿಲ್ಲಾ ನೋಂದಣಾದಿಕಾರಿಗಳು, ಬೆಂಗಳೂರು ನಗರ ಜಿಲ್ಲೆ, ಬೆಂಅಪ್ರಾ ರವರ ಕಛೇರಿಯಲ್ಲಿ ನೊಂದಾಯಿಸಲ್ಪಟ್ಟ ಪರಿತ್ಯಾಜನಾ ಪತ್ರ BDA-1-01520-2018-19, ಸಿ.ಡಿ. ನಂ. BDAD237, ದಿನಾಂಕ 20.06.2018.
7. ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ, ಎಂ.ಆರ್.ಟಿ.ಎಸ್. ಕರ, ಮೆಟ್ರೋ ಕರ ಮತ್ತು ವಿವಿಧ ಶುಲ್ಕಗಳ ಪರಿಷ್ಕೃತ ದರವನ್ನು ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ತೀರ್ಮಾನಕ್ಕೆ ಬದ್ಧರಿರುವುದಾಗಿ ದಿನಾಂಕ 10.01.2018 ಮತ್ತು 23.07.2018 ರಂದು ನೀಡಿರುವ ನೋಟರೈಸ್ಡ್ ಪ್ರಮಾಣ ಪತ್ರ.

ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸರ್ವೆ ನಂ.80/3(ಪಿ), 80/4, 80/5, 80/6, 80/7 ಮತ್ತು 80/8 ಜಮೀನುಗಳ ಒಟ್ಟು 17,401.34 ಚ.ಮೀ. [04 ಎಕರೆ 12 ಗುಂಟೆ] ವಿಸ್ತೀರ್ಣದಲ್ಲಿ ಹಾಲಿ ಸ್ಥಳದಲ್ಲಿ ಲಭ್ಯವಿರುವ 16,693.14 ಚ.ಮೀ. [04 ಎಕರೆ 05 ಗುಂಟೆ (02 ಗುಂಟೆ ಖರಾಬು ಹೊರತುಪಡಿಸಿ)] ವಿಸ್ತೀರ್ಣಕ್ಕೆ ವಸತಿ ಬಡಾವಣೆ ನಕ್ಷೆಯನ್ನು ಅನುಮೋದಿಸುವಂತೆ ಉಲ್ಲೇಖ [1] ರಲ್ಲಿ ಅಧ್ಯಕ್ಷರು, **ನ್ಯಾಯಾಂಗ ಇಲಾಖೆ ವಿವಿಧೋದ್ದೇಶ ಸಹಕಾರ ಸಂಘ ನಿಯಮಿತ** ರವರು ಕೋರಿದ್ದರು.

ಪ್ರಸ್ತಾವನೆಯನ್ನು ಉಲ್ಲೇಖ [2] ರ ದಿನಾಂಕ **09.11.2017** ರಂದು ಜರುಗಿದ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ವಿಷಯ ಸಂಖ್ಯೆ **136/2017** ರಲ್ಲಿ ಮಂಡಿಸಲಾಗಿತ್ತು. **"ಚರ್ಚೆಯ ನಂತರ ಅರ್ಜಿದಾರರು ಹಾಲಿ ಅಭಿವೃದ್ಧಿ ಹೊಂದಿರುವ ಬಡಾವಣೆಗಳ ರಸ್ತೆ ಪರಿಚಲನೆಯನ್ನು ಅಳವಡಿಸಿಕೊಂಡು ನಕ್ಷೆಯನ್ನು ತಯಾರಿಸಿರುತ್ತಾರೆ. ರಾಷ್ಟ್ರೀಯ ಹಸಿರು ನ್ಯಾಯಮಂಡಳಿ [NGT] ಆದೇಶದಂತೆ ದಕ್ಷಿಣ ಭಾಗದಲ್ಲಿನ ನಾಲಾವನ್ನು ತೃತೀಯ ಹಂತದ ನಾಲಾ ಎಂದು ಪರಿಗಣಿಸಿ Buffer ಅಳವಡಿಸಿರುವುದು ಸೂಕ್ತವಾಗಿರುತ್ತದೆ. ಸಲ್ಲಿಸಿರುವ ನಕ್ಷೆಯು RMP-2015 ರ ವಲಯ ನಿಯಮಾವಳಿಗಳಿಗೆ ಅನುಗುಣವಾಗಿದ್ದು, ನಕ್ಷೆ ಅನುಮೋದಿಸುವ ಅಧಿಕಾರವನ್ನು ಮಾನ್ಯ ಆಯುಕ್ತರಿಗೆ ಪ್ರತ್ಯಾಯೋಜಿಸಿ, ಕೆಲವು ಸಾಮಾನ್ಯ ಷರತ್ತುಗಳಿಗೊಳಪಡಿಸಿ ಪ್ರಸ್ತಾವನೆಯನ್ನು ವಸತಿ ಬಡಾವಣೆ ನಕ್ಷೆಗೆ ಅನುಮೋದನೆ ನೀಡಲು ತೀರ್ಮಾನಿಸಲಾಯಿತು".**

ಉಲ್ಲೇಖ [2] ರ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಬಡಾವಣೆ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ [3] ರ ಪತ್ರದಲ್ಲಿ ವಿವಿಧ ಶುಲ್ಕಗಳ ಬಾಬ್ತು ₹. 12,57,780/- [₹. ಹನ್ನೆರಡು ಲಕ್ಷದ ಐವತ್ತೇಳು ಸಾವಿರದ ಏಳುನೂರ ಎಂಭತ್ತು ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸಲು ತಿಳಿಸಲಾಗಿತ್ತು.

ಅರ್ಜಿದಾರರು ದಿನಾಂಕ 05.01.2018 ರಂದು ಉಲ್ಲೇಖ [4] ರಲ್ಲಿ ₹. 12,57,780/- [₹. ಹನ್ನೆರಡು ಲಕ್ಷದ ಐವತ್ತೇಳು ಸಾವಿರದ ಏಳುನೂರ ಎಂಭತ್ತು ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 9668 ರ ಮೂಲಕ ಪ್ರಾಧಿಕಾರಕ್ಕೆ ಪಾವತಿಸಿರುತ್ತಾರೆ. ಪ್ರಾಧಿಕಾರದ ಲೆಕ್ಕ ಶೀರ್ಷಿಕೆಯಲ್ಲಿ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದವರು ದಿನಾಂಕ 08.03.2018 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [5] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ ಮತ್ತು ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಕಾರ್ಯಪಾಲಕ ಅಭಿಯಂತರರು [ಪಶ್ಚಿಮ ವಿಭಾಗ], ವಿಜಯನಗರ ವಾಣಿಜ್ಯ ಸಂಕೀರ್ಣ, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಇವರಿಗೆ ಹಸ್ತಾಂತರಿಸಿಕೊಳ್ಳುವಂತೆ ತಿಳಿಸಲಾಗಿತ್ತು.

ಕಾರ್ಯಪಾಲಕ ಅಭಿಯಂತರರು [ನಾಡಪ್ರಭು ಕೆಂಪೇಗೌಡ ಬಡಾವಣೆ ವಿಭಾಗ], ಇವರು ಉಲ್ಲೇಖ [6] ರಂತೆ ತಾತ್ಕಾಲಿಕ ಕರಡು ವಸತಿ ಬಡಾವಣೆ ನಕ್ಷೆಯಲ್ಲಿನ ಉದ್ಯಾನವನ / ಬಯಲುಜಾಗ ಮತ್ತು ರಸ್ತೆ ಪ್ರದೇಶಗಳನ್ನು ದಿನಾಂಕ 20.06.2018 ರಂದು ನೋಂದಾಯಿತ ಪರಿತ್ಯಜನಾ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುತ್ತಾರೆ.

ಸರ್ಕಾರದ ಆದೇಶಕ್ಕೆ ಅನುಗುಣವಾಗಿ ಉಲ್ಲೇಖ [7] ರಲ್ಲಿ ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲು ಕರ, ಮೆಟ್ರೋಕರ, ವಿವಿಧ ಶುಲ್ಕಗಳ ಪರಿಷ್ಕರಣೆ ದರ ಮತ್ತು ಎಂ.ಆರ್.ಟಿ.ಎಸ್. ಕರಗಳನ್ನು ಪಾವತಿಸಲು ಬದ್ಧರಾಗಿರುವುದಾಗಿ ಛಾಪಾ ಕಾಗದದಲ್ಲಿ ನೋಟರಿಯವರಿಂದ ದೃಢೀಕರಿಸಿದ ಪ್ರಮಾಣ ಪತ್ರವನ್ನು ದಿನಾಂಕ 10.01.2018 ಮತ್ತು 23.07.2018 ರಂದು ಅರ್ಜಿದಾರರು ನೀಡಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಕೆಂಗೇರಿ ಹೋಬಳಿ, ಕೆಂಚನಪುರ ಗ್ರಾಮದ ಸರ್ವೆ ನಂ.80/3(ಪಿ), 80/4, 80/5, 80/6, 80/7 ಮತ್ತು 80/8 ಜಮೀನುಗಳ ಒಟ್ಟು 17,401.34 ಚ.ಮೀ. [04 ಎಕರೆ 12 ಗುಂಟೆ] ವಿಸ್ತೀರ್ಣದಲ್ಲಿ ಹಾಲಿ ಸ್ಥಳದಲ್ಲಿ ಲಭ್ಯವಿರುವ 16,693.14 ಚ.ಮೀ. [04 ಎಕರೆ 05 ಗುಂಟೆ (02 ಗುಂಟೆ ಖರಾಬು ಹೊರತುಪಡಿಸಿ)] ವಿಸ್ತೀರ್ಣಕ್ಕೆ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಅನುಮೋದಿಸಲಾಗಿದೆ.

| | |
|---|---|
| 1 | ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಂತೆ ವಿವಿಧ ಅಳತೆಯ ಒಟ್ಟು 79 ವಸತಿ ನಿವೇಶನಗಳಿದ್ದು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಪೂರ್ವಾನುಮೋದನೆ ಇಲ್ಲದೆ ನಿವೇಶನಗಳ ಅಳತೆ ಹಾಗೂ ನಿವೇಶನಗಳ ಸಂಖ್ಯೆಯನ್ನು ಅನುಮೋದಿತ ಬಡಾವಣೆ ನಕ್ಷೆಯಲ್ಲಿ ಬದಲಾಯಿಸತಕ್ಕದ್ದಲ್ಲ. ವಿನ್ಯಾಸದಲ್ಲಿ ಯಾವುದೇ ಬದಲಾವಣೆ ಮಾಡಿದಲ್ಲಿ ಅದಕ್ಕೆ ಅರ್ಜಿದಾರರೇ ಹೊಣೆಯಾಗಬೇಕಾಗುತ್ತದೆ. |
| 2 | ಬಿಡುಗಡೆಗೊಳಿಸಿದ ತಾತ್ಕಾಲಿಕ ವಸತಿ ಬಡಾವಣೆ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು, ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆಗಳನ್ನು ಮಾಡುವಂತಿಲ್ಲ. |
| 3 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಕುಡಿಯುವ ನೀರು, ತ್ಯಾಜ್ಯ ನೀರು, ವಿಲೇವಾರಿ ಒಳಚರಂಡಿ ವ್ಯವಸ್ಥೆಯನ್ನು ಅರ್ಜಿದಾರರೇ ಕಲ್ಪಿಸತಕ್ಕದ್ದು ಹಾಗೂ ಉದ್ದೇಶಿತ ವಸತಿ ವಿನ್ಯಾಸದಲ್ಲಿ ಒಟ್ಟು ಕ್ಷೇತ್ರದಲ್ಲಿ ಬೀಳುವ ಮಳೆನೀರು ವ್ಯರ್ಥವಾಗಿ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿತೋರಿಸತಕ್ಕದ್ದು. |
| 4 | ಉದ್ಯಾನವನ ಮತ್ತು ಬಯಲುಜಾಗಗಳನ್ನು ಅನುಮೋದಿತ ನಕ್ಷೆ ಪ್ರಕಾರ ಶೇ.100/- ರಷ್ಟು ನಿವೇಶನಗಳ ಬಿಡುಗಡೆಗೊಳಿಸುವ ಮೊದಲು Chain link Fencing ಮಾಡಿ ಅಳವಡಿಸುವುದು ಹಾಗೂ ಅಭಿವೃದ್ಧಿ ಪಡಿಸುವುದು. |
| 5 | ವಸತಿ ಬಡಾವಣೆ ನಕ್ಷೆಯಲ್ಲಿ ತೋರಿಸಿರುವ ರಸ್ತೆ ಅಗಲವನ್ನು ಯಾವುದೇ ಕಾರಣಕ್ಕೂ ಕಡಿಮೆ ಮಾಡಬಾರದು. |
| 6 | Buffer ಪ್ರದೇಶದಲ್ಲಿ ಗಿಡ-ಮರಗಳನ್ನು ಬೆಳಸತಕ್ಕದ್ದು. |
| 7 | ಅರ್ಜಿದಾರರು ಉದ್ದೇಶಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಥವಾ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಬಡಾವನೆ ನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 8 | ಪ್ರಸ್ತಾವನೆಗೆ ಸಂಬಂಧಿಸಿದಂತೆ ಅರ್ಜಿದಾರರು ತಪ್ಪು ದಾಖಲೆ ಅಥವಾ ಇನ್ನಿತರೆ ಫೋರ್ಜರಿ ದಾಖಲಾತಿಗಳನ್ನು ನೀಡಿರುವುದು ರುಜುವಾತಾದಲ್ಲಿ ಈಗ ನೀಡಿರುವ ಬಡಾವಣೆ ನಕ್ಷೆ ಅನುಮೋದನೆಯು ತನ್ನಿಂದತಾನೆ ರದ್ದಾಗುವುದೆಂದು ಭಾವಿಸತಕ್ಕದ್ದು. |
| 9 | ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರವು ಮುಂದೆ ಸೂಚಿಸಬಹುದಾದ ಎಲ್ಲಾ ತಾಂತ್ರಿಕ ವಿಷಯಗಳಿಗೆ ಹಾಗೂ ಶುಲ್ಕಗಳನ್ನು ತುಂಬುವುದರ ನಿರ್ಣಯಕ್ಕೆ ಅರ್ಜಿದಾರರು ಬದ್ಧರಾಗಿರುವುದು. |
| 10 | ಪ್ರಸ್ತಾಪಿತ ವಿನ್ಯಾಸದಲ್ಲಿ ಘನ ತ್ಯಾಜ್ಯಗಳನ್ನು, ಹಸಿತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿ ವಿಂಗಡಿಸಿ. Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |

| | |
|---|---|
| 11 | ವಸತಿ ವಿನ್ಯಾಸದಲ್ಲಿ ಎಲ್ಲಾ ರಸ್ತೆಗಳನ್ನು IRC Specification ಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು, ಅದಕ್ಕೂ ಮುಂಚೆ ಅಂದಾಜುಪಟ್ಟಿಯನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು, ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆಗಾಗಿ ಮತ್ತು ಕಾಮಗಾರಿ ಪರಿಶೀಲನೆಗೆ ಅನುವುಮಾಡಿಕೊಡತಕ್ಕದ್ದು. |
| 12 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೂ ಸೋಲಾರ್ ಲೈಟಿಂಗ್ ಮತ್ತು ಸೋಲಾರ್ ವಾಟರ್ ಹೀಟಿಂಗ್ ವ್ಯವಸ್ಥೆಯನ್ನು ಅಳವಡಿಸಕ್ಕದ್ದು. |
| 13 | ಸರ್ಕಾರದ ಅಧಿಸೂಚನೆ ಸಂಖ್ಯೆ ಸಂವ್ಯಶಾಇ 24 ಶಾಸನ 2015, ಬೆಂಗಳೂರು, ದಿನಾಂಕ: 10/09/2015 ರನ್ವಯ ವಿನ್ಯಾಸವನ್ನು ಪೂರ್ಣ ಪ್ರಮಾಣದಲ್ಲಿ ಅಭಿವೃದ್ಧಿ ಪಡಿಸಿದ ನಂತರ, ಅಂತಿಮವಾಗಿ ವಿನ್ಯಾಸವನ್ನು ಬಿಡುಗಡೆಗೊಳಿಸಲಾಗುವುದು. |
| 14 | ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಪೂರ್ವಭಾವಿಯಾಗಿ ಸಂಬಂಧ ಪಟ್ಟ ಸಕ್ಷಮ ಪ್ರಾಧಿಕಾರದಿಂದ ಕಟ್ಟಡ ನಕ್ಷೆಗೆ ಅನುಮೋದನೆ ಪಡೆಯತಕ್ಕದ್ದು. |
| 15 | ಸಿವಿಲ್ ಕಾಮಗಾರಿ ಕೆಲಸಗಳನ್ನು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಮೇಲ್ವಿಚಾರಣೆಯಲ್ಲಿ ಅರ್ಜಿದಾರರೇ ಕಾರ್ಯಗತ ಮಾಡತಕ್ಕದ್ದು. ಸಿವಿಲ್ ಕಾಮಗಾರಿಗೆ ಸಂಸ್ಕರಿಸಿದ ತ್ಯಾಜ್ಯ ನೀರನ್ನು BWSSB ಯಿಂದ ಖರೀದಿಸಿ ಉಪಯೋಗಿಸತಕ್ಕದ್ದು. |
| 16 | ಅಭಿವೃದ್ಧಿದಾರರು ಕೊಳಚೆ ನೀರನ್ನು ಬಯಲು ಜಾಗ/ ಖಾಲಿ ಜಾಗಗಳಿಗೆ ಬಿಡದೇ ಸಂಸ್ಕರಿಸಿ ಕುಡಿಯುವ ನೀರಿನ ಹೊರತಾಗಿ ಉಳಿದ ಬಳಕೆಗಾಗಿ ಬಳಸತಕ್ಕದು. |
| 17 | ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ, ಎಂ.ಆರ್.ಟಿ.ಎಸ್.ಕರ, ಮೆಟ್ರೋಕರ ಮತ್ತು ಈಗಾಗಲೇ ಪಾವತಿಸಿರುವ ಶುಲ್ಕಗಳ ಪರಿಷ್ಕೃತ ದರಗಳನ್ನು ಪಾವತಿಸುವ ಸಂಬಂಧ ದಿನಾಂಕ 10.01.2018 ಮತ್ತು 23.07.2018 ರಂದು ಸಲ್ಲಿಸಿರುವ ಪ್ರಮಾಣ ಪತ್ರಕ್ಕೆ ಬದ್ಧರಾಗಿರತಕ್ಕದ್ದು. |
| 18 | ಬಡಾವಣೆಯಲ್ಲಿನ ಪ್ರತಿ ನಿವೇಶನಕ್ಕೆ ಗೃಹ ಬಳಕೆ ಹಾಗೂ ಕುಡಿಯುವ ನೀರಿನ ವ್ಯವಸ್ಥೆಗಾಗಿ ಪ್ರತ್ಯೇಕ ಕೊಳವೆಗಳನ್ನು ಒದಗಿಸತಕ್ಕದ್ದು. ಕುಡಿಯುವ ನೀರು ಮತ್ತು ಇತರೆ ಉಪಯೋಗಗಳಿಗೆ Dual Piping System ಅಳವಡಿಸುವುದು. |
| 19 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸಿರುವ ಪ್ರದೇಶದಲ್ಲಿ ವಿವಿಧ ಜಾತಿಯ ಗಿಡಮರಗಳನ್ನು ಬೆಳಸಿ ಅಭಿವೃದ್ಧಿಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 20 | BESCOM ನಿರ್ದೇಶನದಂತೆ ಬಡಾವಣೆಯಲ್ಲಿ ವಿದ್ಯುಚ್ಛಕ್ತಿ ಅಳವಡಿಸಲು ಕ್ರಮ ಕೈಗೊಳ್ಳತಕ್ಕದ್ದು. |

000141

| | | |
|---|---|---|
| 21 | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ನಿವೇಶನಗಳನ್ನು (EWS) ಆರ್ಥಿಕ ಹಿಂದುಳಿದ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸಕ್ಕದ್ದು, ಆ ವರ್ಗದವರಿಗೆ ನಿವೇಶನವನ್ನು ಹಂಚಿಕೆ ಮಾಡತಕ್ಕದ್ದು. (EWS) ಆರ್ಥಿಕ ದುರ್ಬಲ ವರ್ಗದವರಿಗಾಗಿ ಕಾಯ್ದಿರಿಸಿದ ನಿವೇಶನಗಳನ್ನು ಒಂದುಗೂಡಿಸಿ ದೊಡ್ಡ ಅಳತೆಯ ನಿವೇಶನವನ್ನಾಗಿ ಸಮಾಮೇಲನಾ ಮಾಡಿದಲ್ಲಿ ಮೂಲ ಆಶಯ ವಿಫಲವಾಗುವುದರಿಂದ (EWS) ಆರ್ಥಿಕವಾಗಿ ಹಿಂದುಳಿದ ವರ್ಗದವರಿಗಾಗಿ ಕಾಯ್ದಿರಿಸಿದ ವಸತಿ ನಿವೇಶನಗಳನ್ನು ಸಮಾಮೇಲನಾ ಮಾಡತಕ್ಕದ್ದಲ್ಲ. |
| 22 | BWSSB ಅಥವಾ ಸ್ಥಳೀಯ ಸಂಸ್ಥೆ, BESCOM ಇಲಾಖೆಗಳಿಂದ ಹಾಗೂ ಅಗತ್ಯಕನುಗುಣವಾಗಿ KSPCB ಪಡೆದ NOC ಗಳನ್ನು ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 23 | ಬಡಾವಣೆ ನಕ್ಷೆಯಲ್ಲಿ Transformer Yard, RWH, STP ಗಳಿಗಾಗಿ ಸೂಕ್ತಜಾಗಗಳನ್ನು ಕಾಯ್ದಿರಿಸಿದ್ದು ಇವುಗಳನ್ನು ಬದಲಾಯಿಸುವಂತಿಲ್ಲ ಹಾಗೂ ಸಂಬಂಧಪಟ್ಟ ಸಂಸ್ಥೆಯ ಅಭಿಪ್ರಾಯದಂತೆ ಅಭಿವೃದ್ಧಿಪಡಿಸುವುದು. |
| 24 | ಪ್ರಾಧಿಕಾರವು ಆಗಿಂದಾಗ್ಗೆ ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ,

ಅಧ್ಯಕ್ಷರು,
ನ್ಯಾಯಾಂಗ ಇಲಾಖೆ ವಿವಿದೋದ್ದೇಶ ಸಹಕಾರ ಸಂಘ ನಿಯಮಿತ,
ಉಚ್ಚ ನ್ಯಾಯಾಲಯ ಕಟ್ಟಡ,
ಬೆಂಗಳೂರು - 560 001.